ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರವರಿ, 2021

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ SC / ST
ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

72 (196) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ವಿಶ್ವವಿದ್ಯಾನಿಲಯವನ್ನು ವಿಭಜನೆ ಮಾಡಿ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಸೆಂಟ್ರಲ್ ಕಾಲೇಜ್ ಕ್ಯಾಂಪಸ್‌ನಲ್ಲಿ ಕಳೆದ 3 ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವುದು ನಿಜವೇ ;

(ಆ) ಈ ವಿಶ್ವವಿದ್ಯಾನಿಲಯದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ವಿದ್ಯಾರ್ಥಿಗಳಿಗಾಗಿ ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯವನ್ನು ಸೆಂಟ್ರಲ್ ಕಾಲೇಜ್ ಕ್ಯಾಂಪಸ್‌ನಲ್ಲಿ 2021-2022ನೇ ಸಾಲಿನಿಂದ ಪ್ರಾರಂಭ ಮಾಡಲಾಗುವುದೇ ?